**ಸಾಕ್ಷಿಗೆ ದಿನಾಂಕಃ10-04-2026 ರಂದು ಪುನಃ ಕರೆಯಿಸಿ ಪ್ರಮಾಣವಚನ ಬೋಧಿಸಲಾಯಿತು.**

**:: ಪಾಟೀ ಸವಾಲು :: ವಾದಿ ಪರ ಶ್ರೀ. ML ವಕೀಲರಿಂದ ::**

ವಾದಿಯ ದೊಡ್ಡಪ್ಪ ಬಸಪ್ಪ ರವರಿಂದ ನಾನು 1969-70 ರಲ್ಲಿ 6 ಗುಂಟೆ ಜಾಗವನ್ನು ಖರೀದಿ ಮಾಡಿರುತ್ತೇನೆ ಎಂದರೆ ಸರಿ. ಸದರಿ ಆಸ್ತಿಗೂ ದಾವಾ ಶೆಡ್ಯೂಲ್ ಸ್ವತ್ತಿಗೂ ಯಾವುದೇ ಸಂಬಂಧ ಇರುವುದಿಲ್ಲ ಎಂದರೆ ಸರಿಯಲ್ಲ. ದಾವಾ ಹೂಡುವ ಸುಮಾರು 60 ವರ್ಷಗಳ ಹಿಂದೆಯೇ ವಾದಿಯ ಕುಟುಂಬಕ್ಕೆ ದಾವಾ ಸ್ವತ್ತು ವಿಭಾಗದಲ್ಲಿ ಬಂದು ಅಲ್ಲಿನಿಂದ ಇಲ್ಲಿಯವರೆಗೂ ಅನುಭವಿಸುತ್ತಾ ಬಂದಿರುತ್ತಾರೆ ಎಂದರೆ ಸರಿಯಲ್ಲ. ಪ್ರಸ್ತುತದಲ್ಲಿ ದಾವಾ ಶೆಡ್ಯೂಲ್ ಸ್ವತ್ತಿನ ಖಾತೆಯು ಪೌತಿ ಆಧಾರದಲ್ಲಿ ವಾದಿಯ ಹೆಸರಿಗೆ ಬದಲಾವಣೆ ಆಗಿರುತ್ತದೆ ಎಂದರೆ ಸರಿಯಲ್ಲ. ದಾವಾ ಶೆಡ್ಯೂಲ್ ಸ್ವತ್ತನ್ನು ಅಳತೆ ಮಾಡಿಸಿಕೊಳ್ಳಲು ವಾದಿಯು 2015 ರಲ್ಲಿ ಸರ್ವೆ ಇಲಾಖೆಗೆ ಅರ್ಜಿ ನೀಡಿದ್ದರು ಎಂದರೆ ಇರಬಹುದು. ಸದರಿ ಸಮಯದಲ್ಲಿ ಸರ್ವೆಯರ್ ರವರು ದಾವಾ ಶೆಡ್ಯೂಲ್ ಸ್ವತ್ತನ್ನು ಅಳತೆ ಮಾಡಲು ಬಂದಿರುತ್ತಾರೆ ಎಂದರೆ ಸರಿ. ಸಾಕ್ಷಿಯು ಮುಂದುವರೆದು ಆದರೆ ಸದರಿ ಸರ್ವೆಗೆ ಸಂಬಂಧಪಟ್ಟಂತೆ ನಮಗೆ ಯಾವುದೇ ನೋಟೀಸ್ ನೀಡಿರುವುದಿಲ್ಲ ಎಂದು ನುಡಿಯುತ್ತಾರೆ. ಸದರಿ ಅಳತೆ ಮಾಡುವ ಸಮಯದಲ್ಲಿ ನಾನು ಸ್ದಳಕ್ಕೆ ಹೋಗಿರುತ್ತೇನೆ ಎಂದರೆ ಸರಿ. ಸದರಿ ಸಮಯದಲ್ಲಿ ನನ್ನ ಹಾಗೂ ವಾದಿಯ ಸಮಕ್ಷಮ ದಾವಾ ಶೆಡ್ಯೂಲ್ ಸ್ವತ್ತನ್ನು ಅಳತೆ ಮಾಡಿ ದಾವಾ ಎ ಸ್ವತ್ತನ್ನು ನಾನು ಮತ್ತು ಇತರೇ ಪ್ರತಿವಾದಿ 4 ಗುಂಟೆ ಒತ್ತುವರಿ ಮಾಡಿರುತ್ತೇವೆ ಎಂದು ತಿಳಿಸಿರುತ್ತಾರೆ ಎಂದರೆ ಸರಿಯಲ್ಲ. ವಾದಿಯು ದಾವಾ ಎ ಸ್ವತ್ತಿನಲ್ಲಿ ವಾಸದ ಮನೆ ನಿರ್ಮಾಣ ಮಾಡಿರುತ್ತಾರೆ ಎಂದರೆ ಸರಿ. ಪ್ರತಿವಾದಿಗಳಾದ ನಾವು ದಾವಾ ಎ ಸ್ವತ್ತನ್ನು ಮೇಲೆ ಹೇಳಿದ ಒತ್ತುವರಿ ಮಾಡಿದ ಕಾರಣ ನಮ್ಮನ್ನು ಒತ್ತುವರಿ ಬಿಡಿಸಿಕೊಡಲು ಹಲವಾರು ಬಾರಿ ಕೇಳಿದ್ದರು ನಾವು ಬಿಟ್ಟು ಕೊಟ್ಟಿರುವುದಿಲ್ಲ ಎಂದರೆ ಸರಿಯಲ್ಲ. ದಾವಾ ಎ ಸ್ವತ್ತಿಗೆ ಸಂಬಂಧಪಟ್ಟಂತೆ ವಾದಿಯ ಹೆಸರಿನಲ್ಲಿ ಆಗಿರುವ ಖಾತೆಯನ್ನು ನಾವು ಎಸಿ ನ್ಯಾಯಾಲಯದಲ್ಲಿ ಪ್ರಶ್ನೆ ಮಾಡಿರುತ್ತೇವೆ ಎಂದರೆ ಸರಿಯಲ್ಲ. ಸದರಿ ಪ್ರಕರಣದಲ್ಲಿ ಸಿವಿಲ್ ನ್ಯಾಯಾಲಯದಲ್ಲಿ ವ್ಯಾಜ್ಯ ಇತ್ಯರ್ಥಪಡಿಸಿಕೊಳ್ಳುವಂತೆ ಹೇಳಿ ಆದೇಶ ಮಾಡಿರುತ್ತಾರೆ ಎಂದರೆ ಸರಿ. ಎಸಿ ರವರ ಆದೇಶದ ನಂತರದಲ್ಲಿ ನಾವು ಯಾವುದೇ ದಾವೆಯನ್ನು ನ್ಯಾಯಾಲಯದಲ್ಲಿ ಸಲ್ಲಿಸಿರುವುದಿಲ್ಲ ಎಂದರೆ ಸರಿ. ಪ್ರತಿವಾದಿಗಳಾದ ನಮಗೆ

ದಾವಾ ಬಿ ಸ್ವತ್ತಿನ ಮೇಲೆ ಯಾವುದೇ ಹಕ್ಕು ಇರುವುದಿಲ್ಲ ಎಂದರೆ ಸರಿಯಲ್ಲ. ವಾದಿಗೆ ತೊಂದರೆ ಕೊಡುವ ದುರುದ್ದೇಶದಿಂದ ಸುಳ್ಳು ತಕರಾರನ್ನು ಹೂಡಿ ನ್ಯಾಯಾಲಯದಲ್ಲಿ ಸುಳ್ಳು ಸಾಕ್ಷ್ಯವನ್ನು ನುಡಿಯುತ್ತಿದ್ದೇನೆಂದರೆ ಸರಿಯಲ್ಲ. ದಾವಾ ಶೆಡ್ಯೂಲ್ ಸ್ವತ್ತನ್ನು ಲಪಟಾಯಿಸುವ ಉದ್ದೇಶದಿಂದ ನ್ಯಾಯಾಲಯದಲ್ಲಿ ಸುಳ್ಳು ಸಾಕ್ಷ್ಯವನ್ನು ನುಡಿಯುತ್ತಿದ್ದೇನೆಂದರೆ ಸರಿಯಲ್ಲ.

**:: ಮರು ವಿಚಾರಣೆ ಇಲ್ಲ ::**

(ತೆರೆದ ನ್ಯಾಯಾಲಯದಲ್ಲಿ ನನ್ನ ಹೇಳಿಕೆಯಂತೆ ಗಣಕ ಯಂತ್ರದಲ್ಲಿ ಬೆರಳಚ್ಚು ಮಾಡಲಾಯಿತು)

ಓ ಹೇ ಕೇ ಸ ಇ ಎ ಒ

sd/-

ಪ್ರಧಾನ ಸಿ.ಜೆ ಮತ್ತು ಜೆ.ಎಂ.ಎಫ್.ಸಿ

ತರೀಕೆರೆ.

ಸಾಕ್ಷಿಯ ಸಹಿ: